# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 39 ಹೆಚ್‌ಪಿಎ 2023

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:08.07.2024

## ಸುತ್ತೋಲೆ

**ವಿಷಯ:** ಆಗಸ್ಟ್-15ರ ಸ್ವಾತಂತ್ರ್ಯ ದಿನಾಚರಣೆ ಮತ್ತು ನವೆಂಬರ್-26ರ ಸಂವಿಧಾನದ ದಿನಾಚರಣೆ ಸಂದರ್ಭದಲ್ಲಿ ಡಾ.ಬಿ.ಆರ್ ಅಂಬೇಡ್ಕರ್‌ರವರ ಭಾವಚಿತ್ರವನ್ನು ಇಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 07 ಹೆಚ್‌ಪಿಎ 2020, ದಿನಾಂಕ:25.01.2020.

******

ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಿರುವಂತೆ, ಜನವರಿ 26ರ ಗಣರಾಜ್ಯೋತ್ಸವ ದಿನದೊಂದಿಗೆ ಆಗಸ್ಟ್-15ರ ಸ್ವಾತಂತ್ರ್ಯ ದಿನಾಚರಣೆಯಂದು ಕೂಡ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳು, ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ಸಂಸ್ಥೆಗಳು ಹಾಗೂ ಶಾಲಾ ಕಾಲೇಜು ಸೇರಿದಂತೆ ಸರ್ಕಾರದ ವತಿಯಿಂದ ನಡೆಯುವ ಎಲ್ಲಾ ಸಮಾರಂಭಗಳಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಭಾವಚಿತ್ರದೊಂದಿಗೆ ಸಂವಿಧಾನದ ಪಿತಾಮಹ, ಭಾರತ ರತ್ನ ಡಾ||ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರವನ್ನು ಸಹ ಕಡ್ಡಾಯವಾಗಿ ಇಡುವಂತೆ ಸೂಚಿಸಿದೆ.

ಮುಂದುವರೆದು, ನವೆಂಬರ್-26ರ ಸಂವಿಧಾನದ ದಿನಾಚರಣೆ ಸಂದರ್ಭದಲ್ಲಿ ಮೇಲ್ಕಂಡ ಎಲ್ಲಾ ಸಂಸ್ಥೆಗಳು, ಶಾಲಾ ಕಾಲೇಜು ಹಾಗೂ ಸರ್ಕಾರಿ ಕಛೇರಿಗಳಲ್ಲಿ ಸಂವಿಧಾನದ ಪಿತಾಮಹ, ಭಾರತ ರತ್ನ ಡಾ||ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರವನ್ನು ಕಡ್ಡಾಯವಾಗಿ ಇಡುವಂತೆ ಸೂಚಿಸಿದೆ.

**(ವಿಜಯಕುಮಾರ್ ಹೆಚ್ ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಆಸುಇ (ರಾಜ್ಯ ಶಿಷ್ಟಾಚಾರ)

**ಪ್ರತಿಗಳು:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
4. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
5. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ.
6. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್.
7. ಎಲ್ಲಾ ವಿಭಾಗಾಧಿಕಾರಿಗಳು
8. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
9. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
10. ಎಲ್ಲಾ ಜಿಲ್ಲಾಧಿಕಾರಿಗಳು.
11. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
12. ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳು.
13. ಪತ್ರಿಕಾ ಪ್ರಕಟಣೆ / ಹೆಚ್ಚುವರಿ ಪ್ರತಿಗಳು.

**ಮಾಹಿತಿಗಾಗಿ:**

1. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಕಾರ್ಯದರ್ಶಿ, ಸಿಆಸು ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಸಚಿವ ಸಂಪುಟ ಶಾಖೆ **(ಪ್ರಕರಣ ಸಂಖ್ಯೆ:ಸಿ.298/2024)**, ವಿಧಾನಸೌಧ
4. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ರಾಜಕೀಯ)